

# ಹಿಮೋಫಿಲಿಯಾ

## ವಂಶವಾಹಿನಿಯ ಬಳುವಳಿ

ಏಪ್ರಿಲ್ 17 ವಿಶ್ವ ಹಿಮೋಫಿಲಿಯಾ ದಿನ

**ಸಾಮಾನ್ಯವಾಗಿ ದೇಹಕ್ಕೆ ಗಾಯವಾದಾಗ 3 ರಿಂದ 8 ನಿಮಿಷಗಳಲ್ಲಿ ರಕ್ತ ಹೆಪ್ಪುಗಟ್ಟಿ ರಕ್ತ ಸೋರುವಿಕೆಯನ್ನು ತಡೆಯುತ್ತದೆ. ಆದರೆ ಕುಸುಮ ರೋಗ (ಹಿಮೋಫಿಲಿಯಾ) ದಿಂದ ಬಳಲುತ್ತಿರುವವರಲ್ಲಿ ರಕ್ತ ಹೆಪ್ಪುಗಟ್ಟುವುದೇ ಇಲ್ಲ. ಇದೇ ರೀತಿ ಆತಂರಿಕವಾಗಿ ಮೆದುಳಿನೊಳಗೆ, ಗಂಟಿನ ಒಳಗೆ ರಕ್ತಸ್ರಾವವಾಗಿ, ಅಂಗ ವೈಫಲ್ಯ ಸಂಭವಿಸಲೂ ಬಹುದು.**

★ ಡಾ.ಮುರಲೀ ಮೋಹನ್ ಚೂಂತಾರು

ಹಿಮೋಫಿಲಿಯಾ ಎಂಬುದು ರಕ್ತ ಹೆಪ್ಪುಗಟ್ಟುವಿಕೆಯಲ್ಲಿನ ಪ್ರಕ್ರಿಯೆಯಲ್ಲಿ ವ್ಯತ್ಯಯವಿರುವ ರೋಗ. ಇದು ವಂಶವಾಹಿನಿಗಳಲ್ಲಿ ತಾಯಿಯಿಂದ ಮಗನಿಗೆ ಬಳುವಳಿಯಾಗಿ ಬರುವ ಜನ್ಮದಾರಭ್ಯ ರೋಗ.

x ಎಂಬ ವರ್ಣತಂತುಗಳಲ್ಲಿ ಈ ರೋಗ ಸಾಗಿಸಲ್ಪಡುವುದರಿಂದ ಪುರುಷರಿಗೆ ಮಾತ್ರ ಈ ರೋಗ ಸೀಮಿತವಾಗಿರುತ್ತದೆ. ಮಹಿಳೆಯರಲ್ಲಿ ಎರಡು x ವರ್ಣತಂತುಗಳಿದ್ದು ಒಂದು ವರ್ಣತಂತುವಿನಲ್ಲಿನ ವೈಫಲ್ಯವನ್ನು ಇನ್ನೊಂದು ಸಹಜ ವರ್ಣತಂತು ಮುಚ್ಚಿಕೊಂಡು, ರೋಗ ಬರುವ ಸಾಧ್ಯತೆ ಬಹಳ ಕಡಿಮೆ ಇರುತ್ತದೆ. ಹೀಗಾಗಿ ವಂಶವಾಹಿನಿಯನ್ನಾಧರಿಸಿ ಎಲ್ಲ ಹೆಣ್ಣುಮಕ್ಕಳೂ ಈ ಕುಸುಮ ರೋಗವನ್ನು ಸಾಗಿಸ ಬಲ್ಲವರಾಗಿರುತ್ತಾರೆ. ಆದರೆ ರೋಗದಿಂದ ಬಳಲುವ ಸಾಧ್ಯತೆ ತೀರಾ ಕಡಿಮೆ. ಒಟ್ಟಿನಲ್ಲಿ ಈ ರೋಗ ಕುಟುಂಬದಲ್ಲಿ ಮೊಳೆಯುತ್ತದೆ, ಹೆಣ್ಣು ಮಕ್ಕಳು ರೋಗ ವಾಹಿನಿಯಾಗಿರುತ್ತಾರೆ ಮತ್ತು ಗಂಡು ಮಕ್ಕಳಲ್ಲಿ ಪ್ರಕಟಗೊಳ್ಳುತ್ತದೆ.

### ಏನಿದು ಹಿಮೋಫಿಲಿಯಾ?

'ಹೈಮೊ' ಎಂಬ ಗ್ರೀಕ್ ಪದದಿಂದ ಹುಟ್ಟಿಕೊಂಡ ಈ ಶಬ್ದಕ್ಕೆ ರಕ್ತ ಎಂಬ ಅರ್ಥವಿದೆ ಮತ್ತು ಫೀಲಿಯಾ ಎಂದರೆ ಪ್ರೀತಿ ಎಂಬ ಅರ್ಥವಿದೆ. ರಕ್ತವನ್ನು ಪ್ರೀತಿಸುವ ಎಂಬರ್ಥವನ್ನು ನೀಡುವುದರಿಂದ ಹೀಮೋಫಿಲಿಯಾ ಎಂದು ಆಂಗ್ಲಭಾಷೆಯಲ್ಲಿ ಮತ್ತು 'ಕುಸುಮ ರೋಗ' ಎಂದು ಕನ್ನಡದಲ್ಲಿ ಕರೆಯಲಾಗುತ್ತದೆ.

ದೇಹಕ್ಕೆ ಗಾಯವಾದಾಗ ರಕ್ತಹೆಪ್ಪುಗಟ್ಟುವುದು ಅನಿವಾರ್ಯ. ರಕ್ತಹೆಪ್ಪುಗಟ್ಟದಿದ್ದಲ್ಲಿ ರಕ್ತ ಸೋರಿಕೆಯಾಗಿ ಜೀವಕ್ಕೆ ಕುತ್ತು ಬರಬಹುದು. ಈ ರೀತಿ ರಕ್ತ ಹೆಪ್ಪುಗಟ್ಟಲು ರಕ್ತದಲ್ಲಿ ಸುಮಾರು 13 ರಕ್ತ ಹೆಪ್ಪುಗಟ್ಟುವ ಅಂಶಗಳು ಅಥವಾ ಘಟಕಗಳು ಒಂದಕ್ಕೊಂದು ಪೂರಕವಾಗಿ ಕೆಲಸ ಮಾಡುತ್ತಿರುತ್ತದೆ. ಈ ಹನ್ನೆರಡು ಅಂಶಗಳಲ್ಲಿ ಯಾವುದಾದರೊಂದು ಅಂಶ ಸರಿಯಾಗಿ ಕೆಲಸ ನಿರ್ವಹಿಸದಿದ್ದಲ್ಲಿ ಅಥವಾ ಅಂಶಗಳ ಕೊರತೆ ಉಂಟಾದಲ್ಲಿ ರಕ್ತ ಹೆಪ್ಪುಗಟ್ಟುವ ಪ್ರಕ್ರಿಯೆಗೆ ಅಡ್ಡಿಯಾಗುತ್ತದೆ. ರಕ್ತ ಹೆಪ್ಪುಗಟ್ಟುವ 8ನೇ, 9ನೇ ಮತ್ತು 11ನೇ ಘಟಕಗಳ ವೈಫಲ್ಯ ಅಥವಾ ಕೊರತೆಯನ್ನು ಹಿಮೋಫಿಲಿಯಾ ಎಂದು ಕರೆಯತ್ತಾರೆ.

ಹಿಮೋಫಿಲಿಯಾ ರೋಗ ಕ್ರಿಸ್ಮಸ್ ಎಂಬ ವ್ಯಕ್ತಿಯಲ್ಲಿ ಮೊದಲ ಬಾರಿ ಪ್ರಕಟಗೊಂಡ ಕಾರಣದಿಂದ ಕ್ರಿಸ್ಮಸ್ ರೋಗ ಎಂದೂ ಕರೆಯಲಾಗುತ್ತದೆ. ಎಂಟನೇ ಎಂಟರಲ್ಲಿ ರಕ್ತ ಹೆಪ್ಪುಗಟ್ಟುವ ಅಂಶದ ವೈಫಲ್ಯವನ್ನು ಹೆಚ್ಚಾಗಿ ಕುಸುಮ ರೋಗ ಎಂದು ಕರೆಯುತ್ತಾರೆ.